Akashvani: Bangalore
National Bulletin In Kannada
04.06.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

04.06.2026: 13.10hrs

********

**ಮುಖ್ಯಾಂಶಗಳು**

1. ಪ್ರಧಾನಿ ನರೇಂದ್ರ ಮೋದಿ-ವೆನೆಜುವೆಲಾ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ನಡುವೆ ದ್ವಿಪಕ್ಷೀಯ ಮಾತುಕತೆ
2. ಕರ್ನಾಟಕದ ಯಾದಗಿರಿಯಲ್ಲಿ ಕೃಷಿ ಸಂಸ್ಕರಣಾ ಘಟಕಕ್ಕೆ ಚಾಲನೆ ನೀಡಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್
3. ವಾರಾಣಸಿಯಲ್ಲಿ ಇಂದಿನಿಂದ ಎರಡು ದಿನಗಳ ಬ್ರಿಕ್ಸ್ ಸಾಂಸ್ಕೃತಿಕ ಕಾರ್ಯಪಡೆ ಸಭೆ ಆರಂಭ
4. ಕಾಂಗೋದಲ್ಲಿ ಎಬೋಲಾ ಉಲ್ಬಣ ; ನಿಯಂತ್ರಣಕ್ಕೆ ತೀವ್ರ ಪ್ರಯತ್ನ - ವಿಶ್ವ ಆರೋಗ್ಯ ಸಂಸ್ಥೆ ಹೇಳಿಕೆ

**********

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಹೈದರಾಬಾದ್ ಹೌಸ್‌ನಲ್ಲಿ ನಡೆಯುತ್ತಿರುವ ಮಾತುಕತೆಯಲ್ಲಿ ಭಾರತ-ವೆನೆಜುವೆಲಾ ಸಂಬಂಧಗಳು ಮತ್ತು ಇಂಧನ ಭದ್ರತೆ, ವ್ಯಾಪಾರ ಮತ್ತು ಹೂಡಿಕೆ, ಔಷಧಗಳು, ಆರೋಗ್ಯ, ರಕ್ಷಣೆ, ಸಾರಿಗೆ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರಗಳಲ್ಲಿ ಮತ್ತಷ್ಟು ಸಹಕಾರ ವೃದ್ಧಿ ಕುರಿತು ಚರ್ಚೆ ನಡೆಯಿತು. ಇದಕ್ಕೂ ಮುನ್ನ ಅಧ್ಯಕ್ಷೆ ರೊಡ್ರಿಗಸ್, ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರೊಂದಿಗೆ ಸಮಾಲೋಚನೆ ನಡೆಸಿದರು. ಈ ಕುರಿತು ಮಾಹಿತಿ ಹಂಚಿಕೊಂಡಿರುವ ಜೈಶಂಕರ್, ಹಂಗಾಮಿ ಅಧ್ಯಕ್ಷರು, ಭಾರತ-ವೆನೆಜುವೆಲಾ ಸಂಬಂಧಗಳ ಬಗ್ಗೆ ದೀರ್ಘಕಾಲದ ಬದ್ಧತೆ ಹೊಂದಿದ್ದಾರೆ. ಪ್ರಧಾನಿ ಮತ್ತು ಅವರ ನಡುವಿನ ಭೇಟಿಯಿಂದ ಉಭಯ ದೇಶಗಳ ಸಹಕಾರ ಸಂಬಂಧ ಮತ್ತಷ್ಟು ಬಲವರ್ಧನೆಗೊಳ್ಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ರೊಡ್ರಿಗಸ್ ಐದು ದಿನಗಳ ಭಾರತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದ್ದಾರೆ. ಅವರ ಜೊತೆ ವಿದೇಶಾಂಗ ವ್ಯವಹಾರಗಳು,

ಆರ್ಥಿಕತೆ ಮತ್ತು ಹಣಕಾಸು, ವಿಜ್ಞಾನ ಮತ್ತು ತಂತ್ರಜ್ಞಾನ, ಸಂವಹನ ಮತ್ತು ಮಾಹಿತಿ ಮತ್ತು ಸಾರಿಗೆ ಸಚಿವರನ್ನು ಒಳಗೊಂಡ ನಿಯೋಗವು ಆಗಮಿಸಿದೆ. ಭಾರತವು ಇಂಧನ ಮತ್ತು ಹೂಡಿಕೆ ಕ್ಷೇತ್ರಗಳಲ್ಲಿ ವೆನೆಜುವೆಲಾದ ಪ್ರಮುಖ ಪಾಲುದಾರ ರಾಷ್ಟ್ರವಾಗಿದ್ದು, ಭಾರತೀಯ ಸಾರ್ವಜನಿಕ ವಲಯದ ಉದ್ದಿಮೆಗಳು ವೆನೆಜುವೆಲಾದ ಇಂಧನ ವಲಯದಲ್ಲಿ ಗಣನೀಯ ಹೂಡಿಕೆ ಮಾಡಿವೆ.

**********

ಪ್ರಧಾನಿ ನರೇಂದ್ರ ಮೋದಿ ನಾಳೆ ಸೂರತ್ ಮತ್ತು ದಾಮನ್‌ಗೆ ಭೇಟಿ ನೀಡಲಿದ್ದಾರೆ. ಅವರು, ಸುಮಾರು ೨೨ ಸಾವಿರದ ೬೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ಪ್ರಮುಖ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಲೋಕಾರ್ಪಣೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಇದರಲ್ಲಿ ಸಾರಿಗೆ, ಆರೋಗ್ಯ ರಕ್ಷಣೆ, ಕೈಗಾರಿಕಾ ಮೂಲಸೌಕರ್ಯ, ಇಂಧನ, ನಾಗರಿಕ ವಿಮಾನಯಾನ, ಪ್ರವಾಸೋದ್ಯಮ ಮತ್ತು ಸಾಗರ ಸಂಪರ್ಕದ ಪ್ರಮುಖ ಯೋಜನೆಗಳು ಒಳಗೊಂಡಿವೆ. ಪ್ರಧಾನಿಯವರು ಮಧ್ಯಾಹ್ನ ಗುಜರಾತ್‌ಗೆ ಭೇಟಿ ನೀಡಲಿದ್ದು, ಅಲ್ಲಿ ಕೈಗಾರಿಕಾ ಮೂಲಸೌಕರ್ಯಗಳನ್ನು ಪರಿಶೀಲಿಸಿದ ಬಳಿಕ, ಸೂರತ್‌ನಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡುವರು. ಸಂಜೆ ದಾಮನ್‌ಗೆ ಭೇಟಿ ನೀಡಲಿರುವ ಅವರು, ನಮೋ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡವನ್ನು ಹಾಗೂ ನಮೋ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸುವರು.

**********

ನೀತಿ ಆಯೋಗದ ಮಹತ್ವಾಕಾಂಕ್ಷೆಯ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲೊಂದಾದ ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಬದ್ದೇಪಲ್ಲಿ ಗ್ರಾಮದಲ್ಲಿ ಕೃಷಿ ಸಂಸ್ಕರಣೆ ಮತ್ತು ಗ್ರಾಮೀಣ ಉದ್ಯಮಶೀಲತೆಗೆ ಉತ್ತೇಜನ ನೀಡುವ ಮಹತ್ವದ ಯೋಜನೆಯಾದ ಕೃಷಿ ಸಂಸ್ಕರಣಾ ಕೇಂದ್ರಕ್ಕೆ ಕೇಂದ್ರ ಹಣಕಾಸು ಮತ್ತು ಸಾಂಸ್ಥಿಕ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಚಾಲನೆ ನೀಡಿ, ಘಟಕವನ್ನು ವೀಕ್ಷಿಸಿದರು. ಸಂಸ್ಕರಣಾ ಘಟಕ ನಿರ್ವಹಿಸುವ ಮಹಿಳಾ ಸ್ವಸಹಾಯ ಸಂಘದ ಸದಸ್ಯರೊಡನೆ ಸಮಲೋಚಿಸಿದ ಕೇಂದ್ರ ಸಚಿವರು, ಉತ್ಪನ್ನಗಳ ತಯಾರಿಕೆ, ಸಂಸ್ಕರಣೆ ಹಾಗೂ ಮಾರುಕಟ್ಟೆ ಕುರಿತು ಮಾಹಿತಿ ಪಡೆದರು. ನಬಾರ್ಡ್ ಸಹಯೋಗದಲ್ಲಿ ನಿರ್ಮಾಣಗೊಂಡಿರುವ ಈ ಯೋಜನೆಗೆ ನಿರ್ಮಲಾ ಸೀತಾರಾಮನ್ ಅವರ ಸಂಸತ್ ಕ್ಷೇತ್ರಾಭಿವೃದ್ಧಿ ನಿಧಿಯಿಂದ ೫೦ಲಕ್ಷ ರೂಪಾಯಿ ಅನುದಾನ ನೀಡಲಾಗಿದ್ದು, ರಾಜ್ಯ ಸರ್ಕಾರ ಒಂದು ಎಕರೆ ಭೂಮಿ ಮಂಜೂರು ಮಾಡಿದೆ.

**********

ಕೇಂದ್ರ ಗೃಹ ಸಚಿವ ಅಮಿತ್ ಶಾ ಮೇಘಾಲಯದ ಶಿಲ್ಲಾಂಗ್‌ನಲ್ಲಿಂದು ನಡೆಯಲಿರುವ ಈಶಾನ್ಯ ಮಂಡಳಿಯ ೭೩ನೇ ಸಮಗ್ರ ಗೋಷ್ಠಿಯ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಾದೇಶಿಕ ಅಭಿವೃದ್ಧಿಯ ನಿರ್ಣಾಯಕ ವಲಯಗಳಿಗಾಗಿ ರಚಿಸಲಾದ ಸಿಎಂ ಉನ್ನತ ಮಟ್ಟದ ಕಾರ್ಯಪಡೆಗಳು ಸಾಧಿಸಿದ ಪ್ರಗತಿಯ ಕುರಿತು ಗೋಷ್ಠಿಯಲಿ  ಚರ್ಚಿಸಲಾಗುವುದು. ಅದರಲ್ಲಿ ಪ್ರವಾಸೋದ್ಯಮ, ಕೃಷಿ ಮತ್ತು ತೋಟಗಾರಿಕೆ, ಹೂಡಿಕೆ ಪ್ರಚಾರ, ಹಾಲು, ಮೊಟ್ಟೆ, ಮೀನು ಮತ್ತು ಮಾಂಸದಲ್ಲಿ ಸ್ವಾವಲಂಬನೆ, ಕ್ರೀಡಾ ಪ್ರಚಾರ, ಆರ್ಥಿಕ ಕಾರಿಡಾರ್ ಅಭಿವೃದ್ಧಿ, ಮೂಲಸೌಕರ್ಯ ಮತ್ತು ಸಂಪರ್ಕ ಮತ್ತು ಕೈಮಗ್ಗ ಮತ್ತು ಕರಕುಶಲ ವಸ್ತುಗಳ ಕುರಿತು ಪ್ರಾತ್ಯಕ್ಷಿಕೆಗಳನ್ನು ಪ್ರಸ್ತುತ ಪಡಿಸಲಾಗುವುದು. ೨೦೪೭ರ ವೇಳೆಗೆ ಈಶಾನ್ಯ ಪ್ರದೇಶವನ್ನು ಆರ್ಥಿಕ ಬೆಳವಣಿಗೆ, ಸಂಪರ್ಕ, ನಾವೀನ್ಯತೆ, ಸುಸ್ಥಿರತೆ ಮತ್ತು ಸಾಂಸ್ಕೃತಿಕ ಸಮೃದ್ಧಿಯ ತಾಣವನ್ನಾಗಿ ಪರಿವರ್ತಿಸಲು ದೀರ್ಘಾವಧಿಯ ನೀಲನಕ್ಷೆಯನ್ನು ರೂಪಿಸುವ ಈಶಾನ್ಯ ವಿಷನ್ ಪ್ಲಾನ್ ೨೦೪೭ ಕುರಿತು ಸಭೆ  ಚರ್ಚಿಸುತ್ತದೆ. ಈಶಾನ್ಯ ಪ್ರದೇಶದ ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ, ರಾಜ್ಯ ಸಚಿವ ಸುಕಾಂತ ಮಜುಂದಾರ್, ಎಂಟು ಈಶಾನ್ಯ ರಾಜ್ಯಗಳ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳು, ಸಂಸದರು ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ.

**********

ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿನಿಧಿಸುವ ಲೋಕಸಭಾ ಕ್ಷೇತ್ರ ಹಾಗೂ ವಿಶ್ವದ ಪ್ರಾಚೀನ ನಗರಗಳಲ್ಲಿ ಒಂದಾದ ವಾರಾಣಸಿ ಐತಿಹಾಸಿಕ ಅಂತಾರಾಷ್ಟ್ರೀಯ ಕಾರ್ಯಕ್ರಮಕ್ಕೆ ಸಾಕ್ಷಿಯಾಗುತ್ತಿದೆ. ಜಿ-೨೦ ಸಭೆಗಳನ್ನು ಯಶಸ್ವಿಯಾಗಿ ಆಯೋಜಿಸಿದ್ದ ವಾರಾಣಸಿ ಇದೀಗ ಬ್ರಿಕ್ಸ್ ಸಾಂಸ್ಕೃತಿಕ ಕಾರ್ಯಪಡೆಯ ೨ನೇ ಸಭೆಗೆ ಆತಿಥ್ಯ ವಹಿಸುತ್ತಿದೆ. ಇಂದು ಮತ್ತು ನಾಳೆ ನಡೆಯಲಿರುವ ಸಭೆಯಲ್ಲಿ ಚೀನಾ, ಬ್ರೆಜಿಲ್, ಈಜಿಪ್ಟ್ ಸೇರಿದಂತೆ ೧೧ ಬ್ರಿಕ್ಸ್ ಸದಸ್ಯ ರಾಷ್ಟ್ರಗಳು ಭಾಗವಹಿಸಲಿವೆ. ಈ ಸಭೆ ಹಿರಿಯ ರಾಯಭಾರಿಗಳು, ನೀತಿ ನಿರೂಪಕರು ಮತ್ತು ಸಾಂಸ್ಕೃತಿಕ ಪರಿಣಿತರ ಒಗ್ಗೂಡುವಿಕೆಗೆ ಕಾರಣವಾಗಲಿದೆ. ಸಭೆಯ ಅಂಗವಾಗಿ ಕಾಶಿಯ ಅತ್ಯಂತ ಹೆಸರುವಾಸಿಯಾಗಿರುವ ಜಿಐ ಮಾನ್ಯತೆ ಪಡೆದ ವಸ್ತುಗಳ ಪ್ರದರ್ಶನವು ನಡೆಯಲಿದೆ. ಜೊತೆಗೆ ವಾರಾಣಸಿಯ ಶ್ರೀಮಂತ ಕರಕುಶಲ ಕಲೆಯನ್ನು ಬಿಂಬಿಸುವ ೮ ವಿಶಿಷ್ಟ ಉತ್ಪನ್ನಗಳ ಪ್ರದರ್ಶನವು ನಡೆಯಲಿದೆ.

**********

ಯೋಗವು ವಿಶ್ವದಾದ್ಯಂತ ಅಪಾರ ಜನಪ್ರಿಯತೆಯನ್ನು ಗಳಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಇಂದು ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆಯಲಿರುವ ೨೦೨೬ರ ಮೊದಲ ವಿಶ್ವ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್‌ನಲ್ಲಿ ವರ್ಚುವಲ್ ಮೂಲಕ ಭಾಗವಹಿಸುತ್ತಿರುವುದಾಗಿ ತಿಳಿಸಿದ್ದಾರೆ. ಚಾಂಪಿಯನ್‌ಶಿಪ್ ಜಗತ್ತಿನಾದ್ಯಂತದ ಎಲ್ಲಾ ಯೋಗ ಉತ್ಸಾಹಿಗಳನ್ನು ಒಟ್ಟುಗೂಡಿಸಿದೆ. ಯೋಗಾಸನದ ಜಾಗತಿಕ ಕ್ರೀಡಾ ನೀಲನಕ್ಷೆಯಲ್ಲಿ ಇದು ಮಹತ್ವದ ಮೈಲಿಗಲ್ಲು ಎಂದು ವ್ಯಾಖ್ಯಾನಿಸಿರುವ ಪ್ರಧಾನಿ, ಈ ಕಾರ್ಯಕ್ರಮ ಆಯೋಜಿಸುವವರಿಗೆ ಮತ್ತು ಅದರಲ್ಲಿ ಭಾಗವಹಿಸುವವರಿಗೆ ಅವರು ತಮ್ಮ ಶುಭಾಶಯಗಳನ್ನು ತಿಳಿಸಿದ್ದಾರೆ.

**********

ಭಾರತ ಮತ್ತು ಅಮೆರಿಕ ನಡುವೆ ನಡೆಯುತ್ತಿರುವ ಬಹು ನಿರೀಕ್ಷಿತ ವ್ಯಾಪಾರ, ಒಪ್ಪಂದ, ಮಾತುಕತೆ ಇನ್ನು ಕೆಲವೇ ವಾರಗಳಲ್ಲಿ ಮುಕ್ತಾಯಗೊಳ್ಳಲಿದೆ ಎಂದು ಅಮೆರಿಕದ ವಿದೇಶಾಂಗ ಸಚಿವ ಮಾರ್ಕ್ ರುಬಿಯೋ ಹೇಳಿದ್ದಾರೆ. ಕಳೆದ ರಾತ್ರಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಶಿಂಗ್ಟನ್ ಮತ್ತು ದೆಹಲಿ ನಡುವೆ ಸಮಾಲೋಚನೆಗಳು ಮುಕ್ತಾಯ ಹಂತ ತಲುಪಿವೆ. ಇಂಡೋ-ಪಿಸಿಫಿಕ್ ಪ್ರಾಂತ್ಯದಲ್ಲಿ ಭಾರತ, ಅಮೆರಿಕದ ಪ್ರಮುಖ ಕಾರ್ಯತಾಂತ್ರಿಕ ಪಾಲುದಾರ ರಾಷ್ಟ್ರವಾಗಿದೆ. ವಿಶ್ವದ ಅತಿದೊಡ್ಡ ಮತ್ತು ಎರಡು ಹಳೆಯ ಪ್ರಜಾಪ್ರಭುತ್ವಗಳ ನಡುವೆ ಆರ್ಥಿಕ ಸಂಬಂಧಗಳು ಅತ್ಯಂತ ವೇಗವಾಗಿ ಬೆಳವಣಿಗೆ ಹೊಂದುತ್ತಿವೆ ಎಂದು ಅವರು ಹೇಳಿದ್ದಾರೆ. ಕ್ವಾಡ್ ಚರ್ಚೆಗಳಲ್ಲಿ ಭಾರತವನ್ನು ಸೇರ್ಪಡೆ ಮಾಡಿಕೊಳ್ಳುವ ಬಗ್ಗೆ ತಮ್ಮ ಭಾರತ ಭೇಟಿ ವೇಳೆ ಸಮಾಲೋಚನೆ ನಡೆಸಲಾಗಿದೆ. ಇದರಿಂದ ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಸಾಗರ ಸಹಕಾರ ಬಾಂಧವ್ಯ ವೃದ್ಧಿಯಾಗಲಿದೆ ಎಂದರು.

**********

ಆಸ್ಟ್ರೀಯಾ, ಕರ್ಗಿಸ್ತಾನ್, ಪೋರ್ಚುಗಲ್, ಟ್ರಿನಿಡಾಡ್ ಮತ್ತು ಟೊಬ್ಯಾಗೊ ಹಾಗೂ ಜಿಂಬ್ವಾಬೆ ರಾಷ್ಟ್ರಗಳು ಎರಡು ವರ್ಷಗಳ ಅವಧಿಗೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಖಾಯಂಯೇತರ ರಾಷ್ಟ್ರಗಳಾಗಿ ಆಯ್ಕೆಯಾಗಿವೆ. ಈ ಐದು ರಾಷ್ಟ್ರಗಳು ೨೦೨೭ರ ಜನವರಿ ೧ರಿಂದ, ೨೦೨೮ ರಿಂದ ಡಿಸೆಂಬರ್ ೩೧ರವರೆಗೆ ಭದ್ರತಾ ಮಂಡಳಿಯ ಸದಸ್ಯ ರಾಷ್ಟ್ರಗಳಾಗಿ ಕಾರ್ಯ ನಿರ್ವಹಿಸಲಿವೆ. ಈ ಹಿಂದೆ ಸದಸ್ಯ ರಾಷ್ಟ್ರಗಳಾಗಿದ್ದ ಡೆನ್ಮಾರ್ಕ್, ಗ್ರೀಸ್, ಪಾಕಿಸ್ತಾನ, ಪನಾಮಾ

ಮತ್ತು ಸೊಮಾಲಿಯಾ ಬದಲಿಗೆ ಹೊಸದಾಗಿ ಐದು ರಾಷ್ಟ್ರಗಳಿಗೆ ಖಾಯಂಯೇತರ ಸದಸ್ಯ ಸ್ಥಾನಮಾನ ನೀಡಲಾಗಿದೆ.

**********

ಕಾಂಗೋ ಗಣರಾಜ್ಯದಲ್ಲಿ ಎಬೋಲಾ ಸೋಂಕು ಹರಡುವಿಕೆ ಹೆಚ್ಚಾಗಿದ್ದು, ಅದನ್ನು ನಿಯಂತ್ರಿಸಲು ಪ್ರಯತ್ನಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸಿದೆ. ಜಿನಿವಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಶ್ವ ಆರೋಗ್ಯ ಸಂಸ್ಥೆಯ ಮಹಾ ನಿರ್ದೇಶಕ ತೆದ್ರೋಸ್ ಅದಾನೊಮ್ ಸೋಂಕು ದೊಡ್ಡ ಪ್ರಮಾಣದಲ್ಲಿ ಉಲ್ಬಣಿಸುತ್ತಿದ್ದು, ಆರೋಗ್ಯ ಅಧಿಕಾರಿಗಳು ಅದನ್ನು ನಿಯಂತ್ರಿಸಲು ಶ್ರಮಿಸುತ್ತಿದ್ದಾರೆ ಎಂದರು. ಸೋಂಕು ಕಾಣಿಸಿಕೊಂಡ ಪ್ರದೇಶಕ್ಕೆ ಭೇಟಿ ನೀಡಿ, ಪರಿಶೀಲಿಸಲಾಗಿದ್ದು, ಸ್ಥಳೀಯ ಆರೋಗ್ಯ ಕಾರ್ಯಕರ್ತರು ಮತ್ತು ಅಧಿಕಾರಿಗಳು ಅತ್ಯಂತ ಬದ್ಧತೆಯಿಂದ ಸೋಂಕು ನಿಯಂತ್ರಣಕ್ಕೆ ಎಲ್ಲ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ಅವರು ಹೇಳಿದರು. ಮೇ ತಿಂಗಳ ಮಧ್ಯ ಭಾಗದಲ್ಲಿ ಕಾಂಗೋದಲ್ಲಿ ಕಾಣಿಸಿಕೊಂಡ ಸೋಂಕು  ಈವರೆಗೆ ೩೪೪ ಮಂದಿಯಲ್ಲಿ ದೃಢಪಟ್ಟಿದ್ದು, ೬೦ ಮಂದಿ ಸಾವನ್ನಪ್ಪಿದ್ದಾರೆ.

**********

ಎರಡು ದಿನಗಳ ತ್ರಿಪುರಾ ಭೇಟಿಗಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಸಂಜೆ ಅಗರ್ತಲಾಕ್ಕೆ ಆಗಮಿಸಲಿದ್ದಾರೆ. ಈ ವೇಳೆ ಅಮಿತ್ ಶಾ ಅವರು ಪುಷ್ಪಬಂತ ಪ್ಯಾಲೇಸ್ ಹೋಟೆಲ್‌ನ ಶಿಲಾನ್ಯಾಸ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ, ಲಂಕಾಮುರಾದಲ್ಲಿರುವ ಗಡಿ ಭದ್ರತಾ ಪಡೆ -ಬಿಎಸ್‌ಎಫ್ ಗಡಿ ಹೊರಠಾಣೆಗೆ ಭೇಟಿ ನೀಡಲಿದ್ದಾರೆ ಮತ್ತು ರಾಜ್ಯ ಮತ್ತು ಕೇಂದ್ರ ಭದ್ರತಾ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಲಿದ್ದಾರೆ.

**********

ಯುಕೆ ವಿದೇಶಾಂಗ ಮತ್ತು ಕಾಮನ್‌ವೆಲ್ತ್ ವ್ಯವಹಾರಗಳ ಕಾರ್ಯದರ್ಶಿ ಯುವೆಟ್ ಕೂಪರ್ ಎರಡು ದಿನಗಳ ಭಾರತ ಭೇಟಿಗಾಗಿ ಇಂದು ಬೆಳಗ್ಗೆ ನವದೆಹಲಿಗೆ ಆಗಮಿಸಿದರು. ಅವರು, ಇಂದು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಸಮಾಲೋಚನೆಗಳನ್ನು ನಡೆಸಲಿದ್ದಾರೆ. ಕೂಪರ್ ಸಂಜೆ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿ ಮಾಡಿ, ಉಭಯ ದೇಶಗಳ ಸಂಬಂಧ, ವೃದ್ಧಿಯ ಕುರಿತು ಚರ್ಚೆ ನಡೆಸಲಿದ್ದಾರೆ.

*****END*****